ಬಜೆಟ್‌ನಲ್ಲಿ ಅಳವಡಿಸಿಕೊಂಡು ಮಾಡಿಕೊಡಬೇಕೆಂದು ಒತ್ತಾಯವನ್ನು ಈ ಸಂದರ್ಭದಲ್ಲಿ ಮಾಡುತ್ತೇನೆ. ಇವತ್ತಿನ ಈ ಸಂದರ್ಭದಲ್ಲಿ ಬಜೆಟ್ ಮೇಲೆ ಮಾತನಾಡುವುದಕ್ಕೆ ಅವಕಾಶ ಮಾಡಿಕೊಟ್ಟಿದಕ್ಕಾಗಿ ಮಾನ್ಯ ಅಧ್ಯಕ್ಷರಿಗೆ ಹಾಗೂ ಸದಸ್ಯರುಗಳಿಗೆ ವಂದಿಸಿ ನನ್ನ ಮಾತುಗಳನ್ನು ಮುಗಿಸುತ್ತೇನೆ.

7. ಪ್ರಕಟಣೆ :

ಅಧ್ಯಕ್ಷರು :– ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಬಂದಿರುವ ಸಂದೇಶದಲ್ಲಿ ಕರ್ನಾಟಕ ವಿದಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಯ ನಿಯಮ 118 ರ ಮೇರೆಗ 2012ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ವಿಧಾನ ಪರಿಷತ್ತು ದಿನಾಂಕ 28–3–2012ರಂದು ಅಂಗೀಕರಿಸಲಾಗಿದೆ ಎಂದು ತಿಳಿಸಿರುತ್ತಾರೆ.

ಅಧ್ಯಕ್ಷರು :– ಈಗ ಶಾಸನ ಮಂಡನೆ, ಕರ್ನಾಟಕ ವಿಧಾನ ಮಂಡಲದ ವೇತನಗಳು ನಿವೃತ್ತಿ ವೇತನ ಮತ್ತು ಭತ್ಯೆಗಳು (ತಿದ್ದುಪಡಿ) ವಿಧೇಯಕ 2012.

8. ಶಾಸನ ರಚನೆ :

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಆಂಗೀಕರಿಸುವುದು.

1) ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು, ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ 2012.

ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳ ಮತ್ತು ಶಾಸನ ರಚನೆ, ನಗರಾಭಿವೃದ್ಧಿ ಸಚಿವರು) :– ಮಾನ್ಯ ಅಧ್ಯಕ್ಷರೆ 2012ನೇ ಸಾಲಿನ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು :– ಈಗ ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. 2012ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನ, ನಿವೃತ್ತಿ ವೇತನ ಮತ್ತು ಭತ್ಯೆಗಳು (ತಿದ್ದುಪಡಿ) ವಿಧೇಯಕವನ್ನು ಸಭೆ ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು 'ಹೌದು' ಎಂದು ಸೂಚಿಸಬೇಕು.